ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಲಬುರಗಿಯಲ್ಲಿ ಜರುಗಲಿರುವ 85ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: 1) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ: ಡಿಕೆಸಿ/32012/1/2020, ದಿನಾಂಕ: 21-01-2020.

2) ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:FD 208 BRS 2019, ದಿನಾಂಕ: 30-01-2020.

* * *

ಪ್ರಸ್ತಾವನೆ :

ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್, ಬೆಂಗಳೂರು ಇವರು ಕಲಬುರಗಿಯಲ್ಲಿ ನಡೆಯಲಿರುವ 85ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ರೂ.14,15,13,460/- ಗಳು ವೆಚ್ಚವಾಗುತ್ತದೆಂದು ತಿಳಿಸಿ, ಸದರಿ ಅನುದಾನವನ್ನು ಬಿಡುಗಡೆ ಮಾಡಿ, ಸಮ್ಮೇಳನದ ಕೆಲಸ ಕಾರ್ಯಗಳನ್ನು ಕೈಗೊಳ್ಳಲು ಅನುವು ಮಾಡಿಕೊಡಬೇಕೆಂದು ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ, ಕಲಬುರಗಿ ಇವರನ್ನು ಕೋರಿತ್ತಾರೆಂದು, 2019-20ನೇ ಸಾಲಿನ ಕ್ರಿಯಾಯೋಜನೆಯಲ್ಲಿ ಲೆಕ್ಕಶೀರ್ಷಿಕೆಯ 2205-00-12-4-22-103 ರಲ್ಲಿ ರೂ.500.00 ಲಕ್ಷಗಳ ಅವಕಾಶ ಮಾಡಿಕೊಂಡಿದ್ದು, ಇದರಲ್ಲಿ ಈಗಾಗಲೇ ರೂ.375.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, 2019-20ನೇ ಸಾಲಿನ ಕ್ರಿಯಾಯೋಜನೆಯಲ್ಲಿ ಅನುದಾನದ ಲಭ್ಯತೆ ಇಲ್ಲದಿರುವುದರಿಂದ ಹೆಚ್ಚುವರಿ ಅನುದಾನ ರೂ.14,15,13,460/-ಗಳನ್ನು ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ ಇವರಿಗೆ ಬಿಡುಗಡೆ ಮಾಡುವಂತೆ ಮೇಲೆ ಓದಲಾದ (1) ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರ ಆದೇಶದಲ್ಲಿ ಲೆಕ್ಕಶೀರ್ಷಿಕೆ 2205-00-102-4-22-103 ಸಹಾಯಾನುದಾನ - ಸಾಮಾನ್ಯ ಅಡಿಯಲ್ಲಿ ರೂ.1000.00 ಲಕ್ಷಗಳು ಕೊರತೆಯಾಗಲಿದ್ದು, ಲೆಕ್ಕಶೀರ್ಷಿಕೆ 2205-00-102-4-31-059 ಇತರೆ ಖರ್ಚುಗಳು ಅಡಿಯಲ್ಲಿ ರೂ.700.00 ಲಕ್ಷಗಳು ಹಾಗೂ 2205-00-102-4-01-100 ಧನಸಹಾಯ/ಪರಿಹಾರ ಅಡಿಯಲ್ಲಿ ರೂ.300.00 ಲಕ್ಷಗಳು ರಡಿ ಉಳಿತಾಯವಾಗುವ ಒಟ್ಟು ರೂ.1000.00 ಲಕ್ಷಗಳನ್ನು ಕಲಬುರಗಿಯಲ್ಲಿ ಜರುಗಲಿರುವ 85ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಆಚರಣೆಗಾಗಿ ಪುನರ್ವಿನಿಯೋಗದ ಮೂಲಕ ಒದಗಿಸಲು ಆರ್ಥಿಕ ಇಲಾಖೆಯು ಮಂಜೂರಾತಿ ನೀಡಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 41 ಕಸಧ 2020 ಬೆಂಗಳೂರು ದಿನಾಂಕ:31-01-2020

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕಲಬುರಗಿಯಲ್ಲಿ ದಿನಾಂಕ:05-02-2020 ರಿಂದ 07-02-2020 ರವರೆಗೆ ಜರುಗಲಿರುವ 85ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಆಚರಣೆಗಾಗಿ ಲೆಕ್ಕಶೀರ್ಷಿಕೆ 2205-00-102-4-31-059 ಇತರೆ ಖರ್ಚುಗಳು ಅಡಿಯಲ್ಲಿ ರೂ.700.00 ಲಕ್ಷಗಳು ಹಾಗೂ 2205-00-102-4-01-100 ಧನಸಹಾಯ/ಪರಿಹಾರ ಅಡಿಯಲ್ಲಿ ರೂ.300.00 ಲಕ್ಷಗಳು ರಡಿ ಉಳಿತಾಯವಾಗುವ ಒಟ್ಟು ರೂ.1000.00 ಲಕ್ಷ (ರೂಪಾಯಿ ಒಂದು ಸಾವಿರ ಲಕ್ಷಗಳು ಮಾತ್ರ) ಗಳ ಅನುದಾನವನ್ನು ಲೆಕ್ಕಶೀರ್ಷಿಕೆ 2205-00-102-4-22-103 ಸಹಾಯಾನುದಾನ - ಸಾಮಾನ್ಯ ಅಡಿ ಗೆ ಪುನರ್ವಿನಿಯೋಗಗೊಳಿಸಿ, ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ, ಕಲಬುರಗಿ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಿದೆ.

(1) ಯಾವ ಉದ್ದೇಶಕ್ಕೆ ಹಣ ಮಂಜೂರು ಮಾಡಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.

(2) ಬಿಡುಗಡೆ ಮಾಡಿದ ಅನುದಾನ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಉಪಯುಕ್ತತಾ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

(3) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

..2/-

2. ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕ ಶೀರ್ಷಿಕ 2205-00-102-4-22-103 ಪುರಸ್ಕೃತ – ಕನ್ನಡ ಸಾಹಿತ್ಯ ಪರಿಷತ್‌ಗೆ ಸಹಾಯಾನುದಾನ – ಸಹಾಯಾನುದಾನ ಸಾಮಾನ್ಯ ಅಡಿಯಲ್ಲಿ ಭರಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2020. ದಿನಾಂಕ: 13-01-2020ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malathi PS 31/1/20
(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.
31/1/2020 (ಸಂಸ್ಕೃತಿ)

ಇವರಿಗೆ:

1) ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು
2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು
3) ಜಿಲ್ಲಾಧಿಕಾರಿಗಳು, ಕಲಬುರಗಿ ಜಿಲ್ಲೆ, ಕಲಬುರಗಿ (ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ)
4) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
5) ಜಿಲ್ಲಾ ಖಜಾನಾಧಿಕಾರಿ, ಕಲಬುರಗಿ ಜಿಲ್ಲೆ, ಕಲಬುರಗಿ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5&7), ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿ/ಉಪ ಕಾರ್ಯದರ್ಶಿ, ಕನ್ನಡ ಸಂಸ್ಕೃತಿ ಮತ್ತು ವಾರ್ತಾ ಇಲಾಖೆ ರವರ ಆಪ್ತ ಶಾಖೆ, ವಿಕಾಸಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.